ಹುಬ್ಬಳ್ಳಿ ನಗರದಲ್ಲಿರುವ ಶ್ರೀ ಲಕ್ಷ್ಮಿ ಗೃಹ ನಿರ್ಮಾಣ ಸಹಕಾರ ಸಂಘದ - ಅವ್ಯವಹಾರ.

2765: (3775)

ಶ್ರೀ ಜಗದೀಶ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ): ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಬ್ಬಳ್ಳಿ ನಗರದಲ್ಲಿರುವ ಶ್ರೀ ಲಕ್ಷ್ಮಿ ಗೃಹ ನಿರ್ಮಾಣ ಸಹಕಾರ ಸಂಘದ ಆಡಳಿತ ಮಂಡಳಿಯು ಅವ್ಯವಹಾರ ಮಾಡಿರುವುದು ಮತ್ತು ಸಂಘದ ಸದಸ್ಯರಿಗೆ ಮೋಸ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ?

ಶ್ರೀ ಎಸ್.ಎಸ್.ಪಾಟೀಲ್ (ಸಹಕಾರ ಸಚಿವರು):

ಅ) ಬಂದಿದೆ.

ಆ) ಆಡಳಿತ ಮಂಡಳಿಯ ಅವ್ಯವಹಾರಗಳು ಸರ್ಕಾರದ ಗಮನಕ್ಕೆ ಬಂದಿದ್ದು ಕರ್ನಾಟಕ ಸಹಕಾರ ಸಂಘಗಳ ಕಾಯಿದೆ 1959ರ ಕಲಂ 30(1) ರಡಿಯಲ್ಲಿ ಸದರಿ ಸಂಘದ ಆಡಳಿತ ಮಂಡಳಿಯನ್ನು ರದ್ದುಪಡಿಸಿ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸಲಾಗಿದೆ. ಆಡಳಿತಾಧಿಕಾರಿಯು ದಿ: 30-10-1998ರಂದು ಪ್ರಭಾರ ವಹಿಸಿಕೊಂಡಿರುತ್ತಾರೆ.

ಕಳ್ಳಂಬೆಳ್ಳ ಕ್ಷೇತ್ರದಲ್ಲಿ ಮಳೆಯ ಹಾನಿಯಿಂದಾಗಿರುವವರಿಗೆ ಮನೆಗಳ ನಿರ್ಮಾಣ.

2766: (3760)

ಶ್ರೀ ಡಿ.ಬಿ.ಜಯಚಂದ್ರ (ಕಳ್ಳಂಬೆಳ್ಳ): ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ

ಅ) ಕಳ್ಳಂಬೆಳ್ಳ ಕ್ಷೇತ್ರದ ವ್ಯಾಪ್ತಿಯಲ್ಲಿ 600 ಕ್ಕೂ ಹೆಚ್ಚು ಮನೆಗಳು ಮಳೆಯ ಹಾನಿಯಿಂದಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?

ಆ) ಭಾಗಶಃ ಮನೆಗಳು ಬಿದ್ದಿರುವುದರಿಂದ ವಾಸಿಸಲು ಯೋಗ್ಯವಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?

ಇ) ಬಡವರಿಗೆ ವಿಶೇಷವಾಗಿ ಆಶ್ರಯ ಅಂಬೇಡ್ಕರ್ ಮನೆಗಳನ್ನು ಹಂಚಿಕೆ ಮಾಡಲು ಸರ್ಕಾರ ಕೂಡಲೇ ಕ್ರಮ ಕೈಗೊಳ್ಳುವುದೇ?

ಶ್ರೀ ಹೆಚ್. ಡಿ. ರೇವಣ್ಣ (ವಸತಿ ಸಚಿವರು):

ಅ) ಬಂದಿದೆ.

ಆ) ಬಂದಿದೆ.

ಇ) ಈ ಸಾಲಿಗೆ ತುಮಕೂರು ಜಿಲ್ಲೆಗೆ ಆಶ್ರಯ ಯೋಜನೆಯಡಿ 2300 ಮನೆಗಳನ್ನು ಅಂಬೇಡ್ಕರ್ ಯೋಜನೆಯಡಿ 1281 ಮನೆಗಳನ್ನು ನಿರ್ಮಿಸಲು ಗುರಿ ನಿಗಧಿಪಡಿಸಲಾಗಿದೆ.

ಉಳ್ಳಾಲ ಕ್ಷೇತ್ರದಲ್ಲಿ ಖಾಸಗೀ ಬಸ್‌ಗಳಿಗೆ ಪರವಾನಗಿ.

2769: (3833)

ಶ್ರೀ ಕೆ.ಜಯರಾಂ ಶೆಟ್ಟಿ (ಉಳ್ಳಾಲ): ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಖಾಸಗೀ ಬಸ್ಸುಗಳಿಗೆ ಅಂತರರಾಜ್ಯ ಓಡಾಟದ ಪರವಾನಗಿ ನೀಡಲು ಅನುಸರಿಸಬೇಕಾದ ಕ್ರಮಗಳು ಯಾವುವು?

ಆ) ಉಳ್ಳಾಲ ವಿದಾನಸಭಾ ಕ್ಷೇತ್ರದ 'ನೆತ್ತಿಲಪಡವು' ಎಂಬ ಪ್ರದೇಶವು ಕೇರಳ ಮತ್ತು ಕರ್ನಾಟಕ ಗಡಿಯಲ್ಲಿರುವುದು ಹಳ್ಳಿ ಪ್ರದೇಶವಾಗಿದ್ದು, ಇಲ್ಲಿಗೆ ಖಾಸಗಿ ಬಸ್ಸುಗಳ ಓಡಾಟಕ್ಕೆ ಅನುಮತಿ ನೀಡಲಾಗಿದೆಯೇ?

ಇ) ಹಾಗಿದ್ದಲ್ಲಿ ಎಷ್ಟು ಬಸ್ಸುಗಳಿಗೆ ಪರವಾನಗಿ ನೀಡಲಾಗಿದೆ; ಪರವಾನಗಿ ನೀಡಿದ ಬಸ್ಸುಗಳು ಈ ಪ್ರದೇಶಕ್ಕೆ ಬಾರದೆ ಇದ್ದು, ರಾಜ್ಯದ ಬೇರೆ ಬೇರೆ ಜಿಲ್ಲೆಗಳಲ್ಲಿ ಈ ಪರವಾನಗಿ ಮುಖಾಂತರ ಓಡಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಈ) ಹಾಗಿದ್ದಲ್ಲಿ, ಇಂತಹ 500ಕ್ಕೂ ಹೆಚ್ಚು ಬಸ್ಸುಗಳಿಗೆ ಅಕ್ರಮ ಪರವಾನಗಿ ನೀಡಿ ಕೋಟ್ಯಾಂತರ ರೂಪಾಯಿ ಭ್ರಷ್ಟಾಚಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಉ) ಹಾಗಿದ್ದಲ್ಲಿ, ಈ ಬಗ್ಗೆ ಕೈಗೊಂಡ ಕ್ರಮಗಳೇನು?